ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ,

ಬೆಂಗಳೂರು - 560 003

**KARNATAKA SECONDARY EDUCATION EXAMINATION BOARD, 6th CROSS, MALLESHWARAM, BANGALORE – 560 003**

ರಾಜ್ಯ ಮಟ್ಟದ ಎಸ್.ಎಸ್.ಎಲ್.ಸಿ. ಪೂರ್ವಸಿದ್ಧತಾ ಪರೀಕ್ಷೆ, ಫೆಬ್ರವರಿ 2022

# STATE LEVEL SSLC PREPARATORY EXAMINATION, FEBRUARY 2022

ಸಂಕೇತ ಸಂಖ್ಯೆ : **01-K** Code No. : **01-K**

## ವಿಷಯ : ಪ್ರಥಮ ಭಾಷೆ — ಕನ್ನಡ

## Subject : First Language — KANNADA

ದಿನಾಂಕ : 21. 02. 2022 ] [ Date : 21. 02. 2022

ಸಮಯ : ಬೆಳಗ್ಗೆ 10-30 ರಿಂದ ಮಧ್ಯಾಹ್ನ 1-45 ರವರೆಗೆ ] [ Time : 10-30 A.M. to 1-45 P.M.

ಗರಿಷ್ಠ ಅಂಕಗಳು : 100 ] [ Max. Marks : 100

***ಪರೀಕ್ಷಾರ್ಥಿಗಳಿಗೆ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಒಟ್ಟು 45 ಪ್ರಶ್ನೆಗಳನ್ನು ಹೊಂದಿದೆ.
2. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
3. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
4. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.



Downloaded from scoringtarget.com

I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ: **6 × 1 = 6**

1. 'ಷಣ್ಮುಖ' ಪದವು ಈ ಸಂಧಿಯದ್ದಾಗಿದೆ

   (ಎ) ಆದೇಶ ಸಂಧಿ (ಬಿ) ಲೋಪ ಸಂಧಿ

   (ಸಿ) ವೃದ್ಧಿ ಸಂಧಿ (ಡಿ) ಅನುನಾಸಿಕ ಸಂಧಿ

2. ಒಬ್ಬರು ಹೇಳಿದ ಮಾತನ್ನೇ ಯಥಾವತ್ತಾಗಿ ಬರೆಯುವಾಗ ಈ ಚಿಹ್ನೆಯನ್ನು ಬಳಸಲಾಗುವುದು

   (ಎ) ವಾಕ್ಯವೇಷ್ಟನ ಚಿಹ್ನೆ (ಬಿ) ಉದ್ಧರಣ ಚಿಹ್ನೆ

   (ಸಿ) ಆವರಣ ಚಿಹ್ನೆ (ಡಿ) ಭಾವಸೂಚಕ ಚಿಹ್ನೆ

3. ಒಂದು ಪೂರ್ಣಕ್ರಿಯಾಪದದೊಂದಿಗೆ ಸ್ವತಂತ್ರವಾಗಿರುವ ವಾಕ್ಯ

   (ಎ) ಸಂಯೋಜಿತ ವಾಕ್ಯ (ಬಿ) ಸಾಮಾನ್ಯ ವಾಕ್ಯ

   (ಸಿ) ಮಿಶ್ರ ವಾಕ್ಯ (ಡಿ) ಪ್ರಶ್ನಾರ್ಥಕ ವಾಕ್ಯ

4. 'ಬೆಟ್ಟದಾವರೆ' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ

   (ಎ) ತತ್ಪುರುಷ ಸಮಾಸ (ಬಿ) ಕರ್ಮಧಾರಯ ಸಮಾಸ

   (ಸಿ) ಕ್ರಿಯಾ ಸಮಾಸ (ಡಿ) ಅಂಶಿ ಸಮಾಸ



Downloaded from scoringtarget.com

5. 'ಸಾವಿತ್ರಿಯೊಳ್' ಪದದಲ್ಲಿರುವ ವಿಭಕ್ತಿ

(ಎ) ಪಂಚಮೀ (ಬಿ) ದ್ವಿತೀಯಾ

(ಸಿ) ಸಪ್ತಮೀ (ಡಿ) ತೃತೀಯಾ

6. ಕ್ರಿಯಾರ್ಥಕಾವ್ಯಯಕ್ಕೆ ಉದಾಹರಣೆ ಇದು

(ಎ) ಚೆನ್ನಾಗಿ (ಬಿ) ಸಾಕು

(ಸಿ) ಅಥವಾ (ಡಿ) ಅದುವೇ

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ : 4 × 1 = 4**

7. ಹಳು : ಕಾಡು :: ಕೂರ್ಮೆ : ......................... .

8. ಅರ್ಕ : ಎಕ್ಕ :: ದೃಷ್ಟಿ : ......................... .

9. ಹ್ರಸ್ವ ಸ್ವರಗಳು : ೦೬ :: ಅನುನಾಸಿಕಗಳು : ......................... .

10. ಮಾಡಲಿ : ವಿಧ್ಯರ್ಥಕ :: ಮಾಡನು : ......................... .

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : 7 × 1 = 7**

11. ರಾಹಿಲನು ತುರ್ತುಪರಿಸ್ಥಿತಿ ನಿರ್ವಹಣೆಗೆ ಭದ್ರವಾಗಿ ಹಿಡಿದುಕೊಂಡಿದ್ದೇನು ?

12. ಬ್ರಿಟಿಷ್ ಸರ್ಕಾರ ವಿಶ್ವೇಶ್ವರಯ್ಯ ಅವರಿಗೆ ಯಾವ ಪದವಿಯನ್ನು ನೀಡಿ ಗೌರವಿಸಿತು ?

13. ಮನೆಮಂಚಮ್ಮನ ಕತೆಯನ್ನು ದೇವನೂರ ಮಹಾದೇವ ಅವರಿಗೆ ಹೇಳಿದ ಕವಿ ಯಾರು ?

14. ಹುಲಿಗೆ ಪರಮಾನಂದವಾಗಲು ಕಾರಣವೇನು ?



Downloaded from scoringtarget.com

15. ಅಶ್ವಿನಿ ದೇವತೆಗಳ ವರಬಲದಿಂದ ಜನಿಸಿದವರು ಯಾರು ?

16. ನಿಮಗೆ ನಮಸ್ಕರಿಸಿ ಹೋಗಲು ಬಂದೆನಷ್ಟೇ ಎಂದು ದುರ್ಯೋಧನ ಯಾರಿಗೆ ಹೇಳಿದನು ?

17. ಒಡೆಯನ ಮನೆಯ ಅಂಗಳದಲ್ಲಿ ಮಾವಿನ ಮರಗಳು ಹೇಗೆ ನಿಂತಿವೆ ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 10 × 2 = 20**

18. ಮಹಿಳೆಯ ಆರ್ತನಾದ ಕೇಳಿ ರಾಹಿಲನ ಮನದಲ್ಲಿ ಮೂಡಿದ ಪ್ರಶ್ನೆಗಳಾವುವು ?

19. ಲಕ್ಷ್ಮಣನು ಅಣ್ಣನನ್ನು ಹೇಗೆ ಸಂತೈಸಿದನು ?

20. ವಚನಕಾರರ ದೃಷ್ಟಿಯಲ್ಲಿ ಅರಿವು ಎಂದರೆ ಏನು ? ವಿವರಿಸಿ.

21. ಧರ್ಮಬುದ್ಧಿಗೆ ದುಷ್ಟಬುದ್ಧಿಯು ಯಾವ ಸಲಹೆಯಿತ್ತನು ?

22. ಹೊಸಗಾಲದ ಹಸುಮಕ್ಕಳನ್ನು ಹಕ್ಕಿ ಹೇಗೆ ಹರಸಿದೆ ?

23. ವಾಲ್ಮೀಕಿ ಋಷಿಗಳ ಆಶ್ರಮಕ್ಕೆ ಯಜ್ಞಾಶ್ವವು ಬಂದ ಬಗೆಯನ್ನು ವಿವರಿಸಿ.

24. ವಿವೇಕಾನಂದರು ಕೋಮುವಾದದ ಕಟ್ಟಾ ವಿರೋಧಿಯಾಗಿದ್ದರು. ಏಕೆ ?

25. 'ವಸಂತ ಮುಖ ತೋರಲಿಲ್ಲ' ಕವನದಲ್ಲಿ ಪ್ರಕೃತಿಯ ಸಂಭ್ರಮ ಹೇಗೆ ವ್ಯಕ್ತವಾಗಿದೆ ?

26. ಭಗತಸಿಂಗ್ ಹೇಗೆ ಅಮರನಾದನು ?

27. 'ಅಂಗಿ' ಎಂಬ ಉತ್ತರ ಬರುವ ಒಗಟಿನ ವಿಶೇಷತೆಯನ್ನು ತಿಳಿಸಿ.

**V. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ : 2 × 3 = 6**

28. ವಿ.ಕೃ. ಗೋಕಾಕ

29. ಲಕ್ಷ್ಮೀಶ



Downloaded from scoringtarget.com

**VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** **1 × 3 = 3**

30. ನಿಮಗೆ ಪೊಡೆಮಟ್ಟು ಪೋಪೀ

ಸಮಕಟ್ಟಿಂ ಬಂದೆನಹಿತರೊಳ್ ಸಂಧಿಯನೇಂ

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :1 × 3 = 3**

31. "ಮಾರಿಗೌತಣವಾಯ್ತು ನಾಳಿನ ಭಾರತವು"

**VIII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ತ್ವದೊಂದಿಗೆ ವಿಸ್ತರಿಸಿ ಬರೆಯಿರಿ :** **1 × 3 = 3**

32. ತಾಳಿದವನು ಬಾಳಿಯಾನು.

***ಅಥವಾ***

ಮನಸ್ಸಿದ್ದರೆ ಮಾರ್ಗ.

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ : 6 × 3 = 18**

33. "ರೂಪಿನಂತೆ ಮಾತು ಕೂಡ ಎನಿತುದಾರವಾಗಿದೆ!"

34. "ನಾನು ಮುಖ ಮೇಲಾಗಿ ಬಿದ್ದಿದ್ದೆನೆ ?"

35. "ನಿನ್ನ ಪಟುವಗೆ ನಮ್ಮ ಕುಲಮನೆಲ್ಲಮನಟೆವ ಬಗೆ"

36. "ಸಾರ್ವಭೌಮರಾ ನೆತ್ತಿಯ ಕುಕ್ಕಿ"

37. "ನಿನ್ನುಪದೆಸೆಯ ಬಯಸುವನಲ್ಲ"

38. "ನೆಲಕಿಟೆವೆನೆಂದು ಬಗೆದಿರೆ ಚಲಕಿಟೆವೆಂ"



Downloaded from scoringtarget.com

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** **1 × 4 = 4**

39. ಹಸುರಾಗಸ; ..............................................................

..............................................................

..............................................................

.................................................... ಬಿಸಿಲೂ !

**ಅಥವಾ**

ಹೊಸ ಹೂವಿನ ..............................................................

..............................................................

..............................................................

.................................................... ಯುಸಿರೂ !

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** **1 × 4 = 4**

40. ಬಿದ್ದುದನ್ನು ಮೇಲೆಬ್ಬಿಸಿ ನಿಲ್ಲಿಸಿ

ಹೊಸ ಭರವಸೆಗಳ ಕಟ್ಟೋಣ.

ಮನುಜರ ನಡುವಣ ಅಡ್ಡಗೋಡೆಗಳ

ಕೆಡವುತ ಸೇತುವೆಯಾಗೋಣ.



Downloaded from scoringtarget.com

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** **2 × 4 = 8**

41. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು 'ಮಾದರಿ ಮೈಸೂರು ರಾಜ್ಯ' ಹೇಗಾಯಿತು ? ತಿಳಿಸಿ.

*ಅಥವಾ*

ವಿಶ್ವೇಶ್ವರಯ್ಯ ಅವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.

42. ಹಲಗಲಿ ದಂಗೆಗೆ ಕಾರಣ ಮತ್ತು ಕುಂಪಣಿ ಸರ್ಕಾರ ದಂಗೆಯನ್ನು ನಿಯಂತ್ರಿಸಿದ ಬಗೆಯನ್ನು ವಿವರಿಸಿ.

*ಅಥವಾ*

ಹಲಗಲಿ ದಂಗೆಯ ಪರಿಣಾಮವನ್ನು ವಿವರಿಸಿ.

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :**

**1 × 4 = 4 ( 2 + 2 )**

ಭಾರತ ತನ್ನ ಇತಿಹಾಸದಲ್ಲಿ ಕಂಡ ಅತ್ಯಂತ ವರ್ಣರಂಜಿತ ವ್ಯಕ್ತಿತ್ವ ಕೌಟಿಲ್ಯನದು. ತನ್ನ ಹಠದ ಪಟ್ಟನ್ನು ಸಡಿಲಿಸದೆ, ಮನೋನಿಶ್ಚಯದಂತೆ ಅಪೂರ್ವ ಕುಶಲತೆಯನ್ನು ತೋರಿದ ಪ್ರತಿಭಾವಂತನೀತ. ಸರಳ ತಂತ್ರೋಪಾಯಗಳಿಂದ ಚಂದ್ರಗುಪ್ತನ ಶತ್ರುಬಲವನ್ನು ನಿರಾಲಂಬನಗೊಳಿಸಿ ಮೌರ್ಯವಂಶದ ಸ್ಥಾಪನೆಗೆ ಮಾರ್ಗದರ್ಶಕನಾಗುತ್ತಾನೆ. ತನ್ನನ್ನೇ ಹಿಂಬಾಲಿಸಿ ಬಂದ ರಾಜಲಕ್ಷ್ಮೀ ಅಧಿಕಾರಗಳನ್ನು ದೂರೀಕರಿಸಿ ವಿರಕ್ತನಂತೆ ಆಶ್ರಮವಾಸಿಯಾಗುತ್ತಾನೆ. ಚಾಣಕ್ಯನ ಪ್ರಕಾರ ಯುದ್ಧದಲ್ಲಿ ಮೂರು ವಿಧಗಳು. ಮೊದಲನೆಯದು ಪ್ರಕಾಶಯುದ್ಧ - ಸೂಚಿತ ಸ್ಥಳದಲ್ಲಿ ನಿರ್ದಿಷ್ಟ ಸಮಯಕ್ಕೆ ನಡೆಯುವ ಸಂಗ್ರಾಮ. ಎರಡನೆಯದು ಕೂಟಯುದ್ಧ - ತಂತ್ರಗಳ ಮೂಲಕ ಯುದ್ಧ ಮಾಡುವುದು. ಮೂರನೆಯದು ಮೌನಯುದ್ಧ - ಶತ್ರು ಅಧಿಕಾರಿಗಳನ್ನು ನಾಶಪಡಿಸಲು ಗುಪ್ತ ಕಾರ್ಯಾಚರಣೆ ನಡೆಸುವುದು. ಯಾವಾಗ ಶತ್ರುಗಳಿಗಿಂತ ಬಲಿಷ್ಠನಾಗಿದ್ದು ಪರಿಸ್ಥಿತಿ ಅನುಕೂಲಕರವಾಗಿರುತ್ತದೋ ಆಗ ಅವನು ಮುಕ್ತ ಯುದ್ಧವನ್ನೇ ಮಾಡಬೇಕು. ಸೂಚಿತ ಸ್ಥಳದಲ್ಲಿ ನಿರ್ದಿಷ್ಟ ಸಮಯದಲ್ಲಿ ನಡೆಯುವ ಮುಕ್ತ ಯುದ್ಧವೇ ಧರ್ಮಯುದ್ಧ.

43. *ಪ್ರಶ್ನೆಗಳು :*

ಅ) ಚಾಣಕ್ಯನ ಪ್ರಕಾರ ಮೂರು ಬಗೆಯ ಯುದ್ಧಗಳಾವುವು ?

ಬ) ಕೌಟಿಲ್ಯನ ವ್ಯಕ್ತಿ ವೈಶಿಷ್ಟತೆಯನ್ನು ಕುರಿತು ಬರೆಯಿರಿ.



Downloaded from scoringtarget.com

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ :**

**1 × 5 = 5**

44. ನಿಮ್ಮನ್ನು ಹಾವೇರಿಯ ವಿದ್ಯಾನಗರ ಬಡಾವಣೆಯ 'ಸಂಜೀವ' ಎಂದು ಭಾವಿಸಿಕೊಂಡು, ನಿಮ್ಮ ಬಡಾವಣೆಯ ಚರಂಡಿಗಳನ್ನು ದುರಸ್ತಿಪಡಿಸುವಂತೆ ಕೋರಿ, 'ನಗರಸಭೆಯ ಅಧ್ಯಕ್ಷರಿ'ಗೆ ಮನವಿ ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ಹಾಸನದ ಸರ್ಕಾರಿ ಪ್ರೌಢಶಾಲೆಯ 'ಸ್ವರಾ' ಎಂದು ಭಾವಿಸಿಕೊಂಡು, ಶಾಲೆಯಲ್ಲಿ ಹಮ್ಮಿಕೊಂಡ 'ತಾಯಂದಿರ ಸಭೆಗೆ' ಆಹ್ವಾನಿಸಿ, ಹುಬ್ಬಳ್ಳಿ ನಗರದಲ್ಲಿ ವಾಸವಾಗಿರುವ 'ಸ್ವಪ್ನಾ' ಎಂಬ ಹೆಸರಿನ ತಾಯಿಯವರಿಗೆ ಪತ್ರವನ್ನು ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ :**

**1 × 5 = 5**

45. ರಾಷ್ಟ್ರೀಯ ಭಾವೈಕ್ಯ

**ಅಥವಾ**

ಮಹಿಳಾ ಸಬಲೀಕರಣ

Downloaded from scoringtarget.com